# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1037 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 20.08.2025 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ಇದುವರೆಗೂ ಪೂರ್ಣ ಗೊಂಡಿರುವ ಪೋಡಿ ಮುಕ್ತ ಗ್ರಾಮಗಳ ಸಂಖ್ಯೆ ಎಷ್ಟು;</td><td>ಬಹುಮಾಲೀಕತ್ವ ಖಾಸಗಿ/ಹಿಡುವಳಿ ಜಮೀನುಗಳನ್ನು ಏಕ ಮಾಲೀಕತ್ವಕ್ಕೆ ಪರಿವರ್ತಿಸುವ ಉದ್ದೇಶದಿಂದ ಪೋಡಿ ಮುಕ್ತ ಗ್ರಾಮ ಅಭಿಯಾನ ಯೋಜನೆಯನ್ನು ರಾಜ್ಯದ 174 ವಿಧಾನಸಭಾ ಕ್ಷೇತ್ರಗಳಲ್ಲಿ ಸೆಪ್ಟೆಂಬರ್ 2015 ರಿಂದ ಪ್ರಾರಂಭಿಸಲಾಗಿದೆ. ಪ್ರಸ್ತುತ ಅಕ್ಟೋಬರ್-2022 ರಿಂದ ಪೋಡಿ ಮುಕ್ತ ಅಭಿಯಾನ ಯೋಜನೆಯನ್ನು ಮೋಜಿಣಿ ತಂತ್ರಾಂಶದ ಮುಖಾಂತರ ನಿರ್ವಹಿಸಲಾಗುತ್ತಿದೆ.<br><br>ಸೆಪ್ಟೆಂಬರ್-2022 ಅಂತ್ಯದವರೆಗೆ ಪೋಡಿ ಮುಕ್ತ ಗ್ರಾಮ ಅಭಿಯಾನದಡಿ ಒಟ್ಟು 16,630 ಗ್ರಾಮಗಳನ್ನು ಮತ್ತು ನವಂಬರ್-2022 ರಿಂದ ತಂತ್ರಾಶದಲ್ಲಿ ಅಳವಡಿಸಿಕೊಂಡು ಮಾಹೆ ಜುಲೈ 2025 ರ ಅಂತ್ಯಕ್ಕೆ 2,639 ಗ್ರಾಮಗಳು ಸೇರಿ ಒಟ್ಟು 19,269 ಗ್ರಾಮಗಳನ್ನು ಆಯ್ಕೆ ಮಾಡಿಕೊಂಡು ಅಳತೆ ಕಾರ್ಯ ಪೂರೈಸಲಾಗಿದೆ.</td></tr>
<tr><td>(ಆ)</td><td>ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಎಷ್ಟು ಗ್ರಾಮಗಳನ್ನು ಪೋಡಿ ಮುಕ್ತ ಗ್ರಾಮ ಎಂದು ಘೋಷಿಸಲಾಗಿದೆ; ಬಾಕಿಯಿರುವ ಗ್ರಾಮಗಳ ಸಂಖ್ಯೆ ಎಷ್ಟು;</td><td>ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಪೋಡಿ ಮುಕ್ತ ಗ್ರಾಮ ಎಂದು ಘೋಷಿಸಿಸಿರುವ ಮತ್ತು ಬಾಕಿಯಿರುವ ಗ್ರಾಮಗಳ ಕೆಳಕಂಡಂತಿರುತ್ತದೆ.<br><table><tr><th>ಕ್ರ ಸಂ</th><th>ಜಿಲ್ಲೆ</th><th>ಅಳತೆ ಕಾರ್ಯ ಪೂರ್ಣ ಗೊಂಡಿರುವ ಗ್ರಾಮಗಳ ಸಂಖ್ಯೆ</th><th>ಅಳತೆ ಕಾರ್ಯ ಬಾಕಿ ಇರುವ ಗ್ರಾಮಗಳ ಸಂಖ್ಯೆ</th></tr><tr><td>1</td><td>ಚಿತ್ರದುರ್ಗ</td><td>1967</td><td>241</td></tr><tr><td>2</td><td>ತುಮಕೂರು</td><td>664</td><td>792</td></tr><tr><td>3</td><td>ದಾವಣಗೆರೆ</td><td>790</td><td>111</td></tr></table></td></tr>
<tr><td>(ಇ)</td><td>ಬಾಕಿಯಿರುವ ಗ್ರಾಮಗಳಲ್ಲಿ ರೈತರು ಅರ್ಜಿ ಸಲ್ಲಿಸಿದ್ದರೂ ಸಹ ಪೋಡಿ ಕಾರ್ಯಗಳನ್ನು ಕೈಗೊಳ್ಳದಿರಲು ಕಾರಣಗಳೇನು;</td><td>ಪೋಡಿ ಮುಕ್ತ ಗ್ರಾಮ ಯೋಜನೆಯಲ್ಲಿ ಪೋಡಿಗಾಗಿ ರೈತರು ಯಾವುದೇ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.</td></tr>
</table>

| | | |
|---|---|---|
| | | ಪೋಡಿ ಮುಕ್ತ ಗ್ರಾಮ ಯೋಜನೆಗೆ ಆಯ್ಕೆಯಾಗದೆ ಇರುವ ಗ್ರಾಮಗಳಲ್ಲಿ ರೈತರಿಂದ ಯಾವುದೇ ರೀತಿಯ ಅಳತೆ ಕೋರಿ ಅರ್ಜಿ ಸ್ವೀಕೃತವಾದಲ್ಲಿ ನಿಯಮಾನುಸಾರ ಅಳತೆ ಕಾರ್ಯ ಕೈಗೊಳ್ಳಲಾಗುತ್ತಿದೆ. |
| (ಈ) | ಈ ಜಿಲ್ಲೆಗಳಲ್ಲಿ ಪೋಡಿ ಕಾರ್ಯವನ್ನು ಪೂರ್ಣಗೊಳಿಸಲು ಸಮಯ ನಿಗದಿಪಡಿಸಲಾಗಿದೆಯೇ; ನಿಗದಿತ ಸಮಯದಲ್ಲಿ ಪೋಡಿ ಕಾರ್ಯವನ್ನು ಪೂರ್ಣಗೊಳಿಸದಿರುವ ಅಧಿಕಾರಿಗಳ ವಿರುದ್ಧ ಸರ್ಕಾರದ ಕ್ರಮಗಳೇನು? | ಮೊದಲ ಆದ್ಯತೆಯಾಗಿ ಸಾರ್ವಜನಿಕರು ಶುಲ್ಕ ಪಾವತಿಸಿ ಸಲ್ಲಿಸುವ 11 ಇ, ತತ್ಕಾಲ್ ಪೋಡಿ, ಅಲಿನೇಷನ್, ಹದ್ದುಬಸ್ತು, ಇ ಸ್ವತ್ತು, ಕೋರ್ಟ್ ಪ್ರಕರಣಗಳನ್ನು ಅಳತೆ ಮಾಡಲಾಗುತ್ತದೆ.<br><br>ಸದರಿ ಪ್ರಕರಣಗಳು ಹೆಚ್ಚಿಗೆ ಇಲ್ಲದಿದ್ದಲ್ಲಿ ಆದ್ಯತೆ ಮೇರೆಗೆ ಪೋಡಿ ಮುಕ್ತ ಗ್ರಾಮ ಅಭಿಯಾನದಡಿಯಲ್ಲಿ ಗ್ರಾಮಗಳನ್ನು ಹಂತ ಹಂತವಾಗಿ ಆಯ್ಕೆ ಮಾಡಿಕೊಂಡು ಅಳತೆ ಕಾರ್ಯ ಪೂರೈಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಪೋಡಿ ಮುಕ್ತ ಗ್ರಾಮ ಯೋಜನೆಯಲ್ಲಿ ಪೋಡಿ ಕಾರ್ಯವನ್ನು ಪೂರ್ಣಗೊಳಿಸಲು ಸರ್ಕಾರ ಯಾವುದೇ ಸಮಯ (ಕಾಲಮಿತಿ) ನಿಗದಿಪಡಿಸಲಾಗಿರುವುದಿಲ್ಲ.<br><br>ಭೂಮಾಪನ ಇಲಾಖೆಯಲ್ಲಿ ವಿವಿಧ ರೀತಿಯ ಅಳತೆ ಕೋರಿ ಮೋಜಿಣಿ ತಂತ್ರಾಂಶದ ಮೂಲಕ ರೈತರಿಂದ ಸ್ವೀಕೃತವಾಗುವ ಅರ್ಜಿಗಳು ಕಡಿಮೆ ಬಾಕಿ ಇರುವ ತಾಲ್ಲೂಕುಗಳಲ್ಲಿ ಆದ್ಯತೆ ಮೇರೆಗೆ ಪೋಡಿ ಮುಕ್ತ ಗ್ರಾಮ ಯೋಜನೆಯಡಿ ಗ್ರಾಮಗಳನ್ನು ಹಂತ ಹಂತವಾಗಿ ಆಯ್ಕೆ ಮಾಡಿ ಕೊಂಡು ಅಳತೆ ಕಾರ್ಯ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಕಂಇ 163 ಎಸ್‌ಎಸ್‌ಸಿ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು